# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕಅಭಿಯಂತರರಕಛೇರಿ ವಾರ್ಡ್ ಸಂಖ್ಯೆ: 138 ಛಲವಾಧಿ ಜೆ.ಜೆ.ಆರ್ ನಗರ ಬೆಂಗಳೂರು

*********************************************************************************************

ಸಂಖ್ಯೆ: w-138/Committee/Proceding -32/2021-22 dt 19-01-2022

# ವಾರ್ಡ್ ಹಂತದ ಸಮಿತಿ ಸಭೆ

## ವಾರ್ಡ್-138

**19-01-2022** ರಂದು ಬೆಳಿಗ್ಗೆ **12.30** ಘಂಟೆಗೆ ವಾರ್ಡ್ ಸಂಖ್ಯೆ: **138** ಛಲವಾಧಿ ಪಾಳ್ಯ ವಾರ್ಡ್ ಹಂತದ ಸಮಿತಿ ಸಭೆಯನ್ನು ಶ್ರೀ. ಮೊಹಮ್ಮದ್ ಜಾಫರ್ ಸಾದಿಕ್ ಸಹಾಯಕ ಕಾರ್ಯಪಾಲಕ ಅಭಿಯಂತರರು, ಜಂಟಿ ನಿರ್ದೇಶಕರು (ನಗರ ಯೋಜನೆ-ದಕ್ಷಿಣ) ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡಲ್ ಅಧಿಕಾರಿ ವಾರ್ಡ್ ಸಂಖ್ಯೆ **138** ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

## ಸಭೆಯಲ್ಲಿಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ.

ಈ ವಿಷಯದ ಬಗ್ಗೆ ಮಾನ್ಯ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ಬಂದಂತಹ ದೂರುಗಳು ಹಾಗೂ ತಕ್ಷಣ ಗ್ಯಾಂಗ್ ಮೆನ್ ಮತ್ತು ಟ್ರಾಕ್ಟರ್ ಮತ್ತು ಕೂಲಿ ಕಾರ್ಮಿಕರನ್ನು ಉಪಯೋಗಿಸಿಕೊಂಡು ತಕ್ಷಣ ದೂರುಗಳನ್ನು ಪರಿಶೀಲಿಸಿ ಕಾರ್ಯನಿರ್ವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಕಮಿಟಿ ಸದಸ್ಯರು ವಾರ್ಡ್ 138ರ ವ್ಯಾಪ್ತಿಯಲ್ಲಿ ಮುಖ್ಯ ರಸ್ತೆಯಲ್ಲಿ ಕಟ್ಟಡ ತ್ಯಾಜ್ಯವನ್ನು ಹಾಕುತ್ತಿರುವ ಬಗ್ಗೆ ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಲಾಗಿದ್ದು ಕೈಗೊಂಡ ಕ್ರಮದ ಬಗ್ಗೆ ಸಭೆಯಲ್ಲಿ ಕೋರಿದರು

ಅಧ್ಯಕ್ಷರು ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ 138ರ ವ್ಯಾಪ್ತಿಯಲ್ಲಿ ಬರುವ ಮುಖ್ಯ ರಸ್ತೆಯಲ್ಲಿ ಕಟ್ಟಡ ತ್ಯಾಜ್ಯವನ್ನು ಪೂರ್ಣಪ್ರಮಾಣದಲ್ಲಿ ತೆಗೆದಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು ಹಾಗೂ ಮುಂದಿನ ದಿನಗಳಲ್ಲಿ ಕಟ್ಟಡ ತ್ಯಾಜ್ಯ ಎಸೆಯುವವರ ಬಗ್ಗೆ ಬಿ.ಬಿ.ಎಂ.ಪಿ ನಿಯಮನುಸಾರ ಕ್ರಮ ಕೈಗೊಳ್ಳು ವಾರ್ಡ್ ಮಾರ್ಷಲ್‌ಗಳಿಗೆ ತಿಳಿಸಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಬೆಸ್ಕಾಂ ಕಛೇರಿಗೆ ವಾರ್ಡ್ 138 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು

ಬೆಸ್ಕಂ ಅಧಿಕಾರಿಯವರು ವಾರ್ಡ್ 138 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರುಗಳ ವಿವರ ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

ಅಧ್ಯಕ್ಷರು ಆರೋಗ್ಯ ಪರಿವೀಕ್ಷಕರು ವಾಡ್-138 ಮತ್ತು ಕೋವಿಡ್-19 ಸೊಂಕಿನ ಬಗ್ಗೆ ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು

ಅಧ್ಯಕ್ಷರು ವಾರ್ಡ್ 138 ವ್ಯಾಪ್ತಿಯಲ್ಲಿ ಬರುವ ರಸ್ತೆಗಳಲ್ಲಿ ಗುಂಡಿ ಮುಚ್ಚುವಂತೆ ಮಾನ್ಯ ಶಾಸಕರು, ಚಾಮರಾಜ ಪೇಟೆ ವಿಧಾನ ಸಭೆ ಕ್ಷೇತ್ರ ರವರು ಸಭೆಯಲ್ಲಿ ವಾರ್ಡ್ ವ್ಯಾಪ್ತಿಯ ಅಡ್ಡರಸ್ತೆಗಳು ಮತ್ತು ಚಿಕ್ಕ ಪುಟ್ಟ ರಸ್ತೆಗಳಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವಂತೆ ತಿಳಿಸಿದು, ರಸ್ತೆ ಗುಂಡಿಗಳನ್ನು ಗುರ್ತಿಸಿ ಗುಂಡಿಗಳನ್ನು ಮುಚ್ಚುವಂತೆ ಸೂಚಿಸಿದರು.

ಈ ವಿಷಯದ ಬಗ್ಗೆ ಮಾನ್ಯ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್‌ನಲ್ಲಿ ಬರುವ ಅಡ್ಡರಸ್ತೆ ಮತ್ತು ಸಣ್ಣ ರಸ್ತೆಗಳಲ್ಲಿ ಬರುವ ರಸ್ತೆ ಗುಂಡಿಗಳನ್ನು ಗುರ್ತಿಸಿ ಮುಚ್ಚಿಸಲಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಆರೋಗ್ಯ ಪರಿವೀಕ್ಷಕರು ವಾರ್ಡ್ 138ರ ವ್ಯಾಪ್ತಿಯಲ್ಲಿ ಕೋವಿಡ್-19 ಒಮಿಕ್ರಾನ್ ವೈರಸ್ ಹೆಚ್ಚಾಗುತ್ತಿರುವುದರಿಂದ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಿವರಿಸುವಂತೆ ಕೋರಿದರು.

--3

ಮಾನ್ಯ ವೈದ್ಯಾಧಿಕಾರಿಗೆ ಪ್ರತಿನಿಧಿಯಾದ ಒರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ 138ರ ವ್ಯಾಪ್ತಿಯಲ್ಲಿ ಕೋವಿಡ್-19 ಒಮಿಕ್ರಾನ್ ವೈರಸ್ ಹೆಚ್ಚುಗುತ್ತಿರುವುದರಿಂದ ಸರ್ಕಾರಿ ಆದೇಶದಂತೆ ಕಾರ್ಯನಿರ್ವಹಿಸುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು ಹಾಗೂ ಹೆಚ್ಚಿನ ಪ್ರಮಾಣದಲ್ಲಿ ಲಸಿಕೆ ಹಾಕುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು ಮತ್ತು 15ರಿಂದ 18 ವರ್ಷದವರಿಗೆ ಸರ್ಕಾರಿ ಆದೇಶದಂತೆ ಲಸಿಕೆ ಹಾಕುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಬಿಡಬ್ಲೂಎಸ್ಎಸ್‌ಬಿ ಕಛೇರಿಗೆ ವಾರ್ಡ್ 138 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು

ಬಿಡಬ್ಲೂಎಸ್ಎಸ್‌ಬಿ ಅಧಿಕಾರಿಗಳು ವಾರ್ಡ್ 138 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

ಅಧ್ಯಕ್ಷರು ಪ್ರತಿ ನಿತ್ಯ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿಯ ವಿವರವನ್ನು ನೀಡುವಂತೆ ಸಭೆಯಲ್ಲಿ ತಿಳಿಸಿದರು.

.. ಕಿರಿಯ ಆರೋಗ್ಯ ಪರಿವೀಕ್ಷರು ವಾರ್ಡ್ -138ರ ವ್ಯಾಪ್ತಿಯಲ್ಲಿ ಬರುವ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ವಿವರವನ್ನು ಸಭೆಯಲ್ಲಿ ತಿಳಿಸಿದರು

ಮಾನ್ಯ ಅಧ್ಯಕ್ಷರು ವಾರ್ಡ್ 138ರ ವ್ಯಾಪ್ತಿಯಲ್ಲಿ ಮಾರ್ಷಲ್‌ಗಳು ವಿಧಿಸಿದ ದಂಡದ ವಿವರವನ್ನು ಕೋರಿದರು.

ವಾರ್ಡ್-138ರ ಮಾರ್ಷಲ್ ಗಳು ಒಟ್ಟು ವಿಧಿಸಿದ ದಂಡ ರೂ. 20000 ಎಸ್ ಡಬ್ಲೂಎಂ. ದಂಡ ರೂ. 15,000 ಎಂದು ಸಭೆಯಲ್ಲಿ ತಿಳಿಸಿದರು ಸದರಿ ಹಣವನ್ನು ಮುಖ್ಯ ಕಛೇರಿಗೆ ಸಲ್ಲಿಸಿರುತ್ತಾರೆ.

---4

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

## ಹಾಜರಿದ್ದ ವಾರ್ಡ್ ಕಮಿಟಿ ಸದಸ್ಯರು

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಶ್ರೀ. ಮೊಹಮ್ಮದ್ ಜಾಫರ್ ಸಾದಿಕ್ ಸಹಾಯಕ ಕಾರ್ಯಪಾಲಕ ಅಭಿಯಂತರರು, ಜಂಟಿ ನಿರ್ದೇಶಕರು (ನಗರ ಯೋಜನೆ-ದಕ್ಷಿಣ) ದೂ.ಸಂಖ್ಯೆ | ಅಧ್ಯಕ್ಷರು | [signature] |
| 2 | ಶ್ರೀ ಗಿರಿಧರ್, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 138, ಬಿ.ಬಿ.ಎಂ.ಪಿ, ದೂ. 8618436036 | ಸದಸ್ಯ ಕಾರ್ಯದರ್ಶಿ | [signature] |
| 3 | ಗೀತಾ ಹೆಚ್, ದೂ. 9986537126 ಕಿರಿಯ ಆರೋಗ್ಯ ಪರಿವೀಕ್ಷಕರು. ವಾರ್ಡ್ -138 | ಸದಸ್ಯರು | H. Geetha |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ ದೂ. 9342582372 ಶ್ರೀ ಬಾಬು (ಕೆಲಸ ಪರಿವೀಕ್ಷಕರು) | ಸದಸ್ಯರು | V. [signature] |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ ದೂ. 9845563157 | ಸದಸ್ಯರು | G.V. Boswreee |
| 6 | ಶ್ರೀ ಮೊಹಮದ್ ಸಾಧೀಕ್ ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ನಂ. 9945373444 | ಸದಸ್ಯರು | for [signature] |
| 7 | ಶ್ರೀ ಮುಸ್ತಕ್ ಶರೀಫ್ ದೂ. 9880960040 ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ | ಸದಸ್ಯರು | [signature] |
| 8 | ಶ್ರೀ ಶಿವಯ್ಯ (ಆರ್.ಐ) 9480685303 ಕಂದಾಯ ಪರಿವೀಕ್ಷಕರು | ಸದಸ್ಯರು | |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು.(ಘ.ತ್ಯಾ.ನಿ) ರವರ ಪ್ರತಿನಿಧಿ ಗೀತಾ ಹೆಚ್, ದೂ. 9986537126 | ಸದಸ್ಯರು | H. Geetha |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ ( ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ 9845444086 | ಸದಸ್ಯರು | [signature] 19/01/22 |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂತರರು . (ಬೇಸ್ಕಂ)ರವರ ಪ್ರತಿನಿಧಿ | ಸದಸ್ಯರು | [signature] |

[signature]
ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 138
ವಾರ್ಡ್ ಹಂತದ ಸಮಿತಿ

[signature]
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 138